# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/ 212 /ಗ್ರಾಪಂಅ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:29-06-2012

## ಸುತ್ತೋಲೆ

**ವಿಷಯ:** ವಿಶೇಷ ಗ್ರಾಮ ಸಭೆಯನ್ನು ಆಯೋಜಿಸುವ ಬಗ್ಗೆ.
**ಉಲ್ಲೇಖ:** ಸುತ್ತೋಲೆ ಸಂಖ್ಯೆ: ಗ್ರಾಅಪ 212 ಗ್ರಾಪಂಅ 2011 ದಿನಾಂಕ:01-08-2011

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 3 ಹಾಗೂ 3(ಎ) ರನ್ವಯ ಪ್ರತಿ ವರ್ಷ ಗ್ರಾಮ ಸಭೆಗಳನ್ನು ನಡೆಸುವುದು ಗ್ರಾಮ ಪಂಚಾಯತಿಯ ಕರ್ತವ್ಯ ಹಾಗೂ ಜವಾಬ್ದಾರಿಯಾಗಿರುತ್ತದೆ. ಸರ್ಕಾರವು ಗ್ರಾಮೀಣ ಪ್ರದೇಶಗಳಲ್ಲಿ ಪೌಷ್ಠಿಕ ಆಹಾರದ ಸವಾಲುಗಳು ಹಾಗೂ ಅದಕ್ಕೆ ಸಂಬಂಧಿಸಿದ ಇತರೆ ವಿಷಯಗಳ ಬಗ್ಗೆ ವಿಶೇಷ ಗ್ರಾಮ ಸಭೆಯನ್ನು ಆಯೋಜಿಸುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚನೆ ನೀಡಿರುತ್ತದೆ.

ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಪ್ರಮಾಣ ಕಡಿಮೆಮಾಡುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದ ಗೌರವಾನ್ವಿತ ನ್ಯಾಯಮೂರ್ತಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯು ವರದಿ ಸಲ್ಲಿಸಿ ಶಿಫಾರಸ್ಸುಗಳನ್ನು ನೀಡಿರುತ್ತದೆ. ಅದರನ್ವಯ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಲಾಗಿದೆ.

1) ಅಂಗನವಾಡಿ ಕಟ್ಟಡ ಅವಶ್ಯವಿರುವಲ್ಲಿ ಕೂಡಲೇ ನಿರ್ಮಾಣಮಾಡುವುದು. ಮಕ್ಕಳ ಅಪೌಷ್ಠಿಕತೆ ಮತ್ತು ಆರೋಗ್ಯ ತಪಾಸಣೆ ಕುರಿತಂತೆ ವಿಶೇಷ ಗ್ರಾಮ ಸಭೆಗಳನ್ನು ನಡೆಸುವುದು.
2) ಅಂಗನವಾಡಿ ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ವ್ಯವಸ್ಥೆ ಮಾಡುವುದು.
3) ಅಂಗನವಾಡಿ ಕೇಂದ್ರಗಳಿಗೆ ವಿದ್ಯುತ್‌ಚ್ಛಕ್ತಿ ಹಾಗೂ ಸಾಕಷ್ಟು ಬೆಳಕು ಮತ್ತು ಗಾಳಿ ಇರುವಂತೆ ತಾಲ್ಲೂಕು ಪಂಚಾಯತಿಗಳು ಆದ್ಯತೆ ಮೇಲೆ ಕ್ರಮ ವಹಿಸತಕ್ಕದ್ದು.
4) ಸ್ನೇಹಿ ಶೌಚಾಲಯಗಳು ಮತ್ತು ಅಂಗವಿಕಲ ಮಕ್ಕಳಿಗೆ ಪ್ರತ್ಯೇಕ ಶೌಚಾಲಯ ಕಲ್ಪಿಸುವುದು.
5) ಅಂಗನವಾಡಿ ಕೇಂದ್ರಗಳಿಗೆ ಸ್ಥಳಾವಕಾಶ ಕಲ್ಪಿಸುವುದು ಮತ್ತು ಕಾಂಪೌಡ್ ಗೋಡೆ ನಿರ್ಮಿಸುವುದು.
6) 0-6 ವಯಸ್ಸಿನ ಮಕ್ಕಳಿಗೆ ವೈದ್ಯಕೀಯ ತಪಾಸಣೆಯನ್ನು ಮಕ್ಕಳ ವೈದ್ಯರು/ನುರಿತ ವೈದ್ಯರಿಂದ ಏರ್ಪಡಿಸುವುದು.
7) ಅಪೌಷ್ಠಿಕತೆಯಿಂದ ಬಳಲುವ ಮಕ್ಕಳ ಕುಟುಂಬಕ್ಕೆ ಅಂತ್ಯೋದಯ ಅಥವಾ ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸುವುದು.

ಎಲ್ಲಾ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳು ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಪ್ರಮಾಣ ಕಡಿಮೆ ಮಾಡುವ ಬಗ್ಗೆ ಇತರೆ ಇಲಾಖೆಗಳೊಂದಿಗೆ ಪೂರಕವಾದ ನೆರವು ನೀಡಿ ಸಮನ್ವಯ ಸಾಧಿಸುವಂತೆ ಸೂಚಿಸಲಾಗಿದೆ.

Radha Krishna

(ಕೆ. ರಾಧಾಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ತಾಲ್ಲೂಕು ಪಂಚಾಯತಿ,ಕಾರ್ಯನಿರ್ವಾಹಕ ಅಧಿಕಾರಿಗಳು